9818

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 31 |
| ಮಾನ್ಯ ಸದಸ್ಯರ ಹೆಸರು | ಡಾ. ತಳವಾರ್ ಸಾಬಣ್ಣ |
| ಉತ್ತರಿಸುವ ದಿನಾಂಕ | 13/02/2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಜಿಲ್ಲೆ ಸುಮಾರು 60 ಲಕ್ಷ ಜನಸಂಖ್ಯೆ ಹೊಂದಿದ ರಾಜ್ಯದ ಅತಿದೊಡ್ಡ ಜಿಲ್ಲೆಯಾಗಿದ್ದು, ಬ್ರಿಟಿಷರ ಕಾಲದಲ್ಲಿ (1859 ರಲ್ಲಿ) ಸ್ಥಾಪಿಸಿದ ಆಸ್ಪತ್ರೆ ಜಾಗದಲ್ಲಿ ಇಂದು ಜಿಲ್ಲಾ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದ್ದು ಇಡೀ ಜಿಲ್ಲೆ ಈ ಒಂದು ಆಸ್ಪತ್ರೆಯ ಮೇಲೆಯೆ ಅವಲಂಬಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಬಂದಿದ್ದಲ್ಲಿ, ಬೆಳಗಾವಿಯ ವೈದ್ಯಕೀಯ ಶಿಕ್ಷಣ ಸಂಸ್ಥೆಗೆ (ಬಿಮ್ಸ್) ಇನ್ನೂ ವೈದ್ಯಕೀಯ ಬೋಧನಾ ಆಸ್ಪತ್ರೆ ಸ್ಥಾಪಿಸಲು ವಿಳಂಬ ಮಾಡುತ್ತಿರುವುದು ಯಾಕೆ; | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ 450 ಹಾಸಿಗೆ ಸಾಮರ್ಥ್ಯದ ಹೊಸ ಆಸ್ಪತ್ರೆಯನ್ನು ನಿರ್ಮಿಸುವುದಕ್ಕೆ ಸಂಬಂಧಿಸಿದಂತೆ ಸಹಾಯಕ ಕಾರ್ಯಕಾರಿ ಇಂಜಿನಿಯರ್, ಆಕುಕ ಇಂಜಿನಿಯರಿಂಗ್ ವಿಭಾಗ, ಬೆಳಗಾವಿ ಇವರು ಅಂದಾಜು ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಪ್ರಸಕ್ತ ಸಾಲಿನಲ್ಲಿ ಸದರಿ ಆಸ್ಪತ್ರೆಯನ್ನು ನಿರ್ಮಾಣ ಮಾಡುವ ಪ್ರಸ್ತಾವನೆಯನ್ನು ಪರಿಗಣಿಸಲು ಅವಕಾಶವಾಗುವುದಿಲ್ಲ.<br><br>ಪ್ರಸುತ ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಬೋಧನಾ ಆಸ್ಪತ್ರೆಯಾಗಿ 1160 ಹಾಸಿಗೆ ಸಾಮರ್ಥ್ಯದ ಜಿಲ್ಲಾ ಆಸ್ಪತ್ರೆಯು ಕಾರ್ಯನಿರ್ವಹಿಸುತ್ತಿರುವುದರಿಂದ ರೋಗಿಗಳ ಚಿಕಿತ್ಸೆಗೆ ಯಾವುದೇ ಅನಾನುಕೂಲವಾಗಿರುವುದಿಲ್ಲ. |
| ಇ) | ಬೆಳಗಾವಿಯ ವೈದ್ಯಕೀಯ ಶಿಕ್ಷಣ ಸಂಸ್ಥೆಯೊಂದಿಗೆ ಸ್ಥಾಪಿಸಿದ ಬೀದರ್, ರಾಯಚೂರು, ಮಂಡ್ಯ, ಹಾಸನ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಹೊಸದಾಗಿ ಬೋಧನಾ ಆಸ್ಪತ್ರೆಗಳನ್ನು ಸ್ಥಾಪಿಸಲಾಗಿದ್ದು, ಬೆಳಗಾವಿಯಲ್ಲಿ ಈವರೆವಿಗೂ ಸ್ಥಾಪಿಸದಿರಲು ಕಾರಣಗಳೇನು; | |
| ಈ) | ಬೆಳಗಾವಿ ನಗರದ ಮಧ್ಯದಲ್ಲಿಯೇ ವೈದ್ಯಕೀಯ ಶಿಕ್ಷಣ ಸಂಸ್ಥೆ ಪಕ್ಕದಲ್ಲಿ ಸಾಕಷ್ಟು ಸ್ಥಳವಿದ್ದು, 500 ಬೆಡ್‌ಗಳನ್ನು ಹೊಂದಿದ ಹೊಸ ವೈದ್ಯಕೀಯ ಬೋಧನಾ ಆಸ್ಪತ್ರೆ ಸ್ಥಾಪಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ? | |

ಸಂಖ್ಯೆ: ಎಂಇಡಿ 119 ಎಂಎಂಸಿ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು



Generated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 09/02/2023 07:09 PM